ಅ) ರೈತರಲ್ಲಿ ಕಾನೂನಿನ ಬಗ್ಗೆ ಜಾಗೃತಿ ಮೂಡಿಸಲು ಕೃಷಿ ಮಾರಾಟ ಮಂಡಳಿ ಹಾಗೂ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳು ಈ ಕುರಿತು ಕರಪತ್ರಗಳ ಪೋಸ್ಟರುಗಳ, ಧ್ವನಿವರ್ದಕಗಳ ಮೂಲಕ ಹಾಗೂ ಮಾರುಕಟ್ಟೆ ಸಮಿತಿಗಳ ಪ್ರಾಂಗಣಗಳಲ್ಲಿ ದೊಡ್ಡ ಹೋರ್ಡಿಂಗ್‌ಗಳನ್ನು (ದೊಡ್ಡ ಬೋರ್ಡುಗಳು) ಸ್ಥಾಪಿಸುವ ಮೂಲಕ ವ್ಯಾಪಕ ಪ್ರಚಾರ ಕೈಗೊಂಡಿದೆ. ಆಕಾಶವಾಣಿ ನಿಲಯಗಳ ಸಹಯೋಗದೊಂದಿಗೆ ಬಾನುಲಿ ಪಾಠಗಳನ್ನು ರೈತರಲ್ಲಿ ಜಾಗೃತಿ ಮೂಡಿಸಲು ನಡೆಸಲಾಗುತ್ತಿದೆ.

ಆ) ದಳ್ಳಾಳಿಗಳ : ವರ್ತಕರ ಲೆಕ್ಕ ಪತ್ರಗಳನ್ನು ಕಾನೂನು ಪ್ರಕಾರ ಪರಿಶೀಲಿಸಲು ಮಾರುಕಟ್ಟೆ ಸಮಿತಿಗಳಿಗೆ ಮತ್ತು ಇಲಾಖಾ ಅಧಿಕಾರಿಗಳಿಗೆ ನಿರ್ದೇಶನಗಳನ್ನು ನೀಡಲಾಗಿದೆ. ಮತ್ತು ರೈತರಿಂದ ದಲ್ಲಾಲರು ಕಾನೂನು ಬಾಹಿರವಾಗಿ ದಲ್ಲಾಲಿ ಪಡೆದ ಪ್ರಕರಣಗಳು ಕಂಡು ಬಂದಲ್ಲಿ ತಪ್ಪಿತಸ್ಥ ದಲ್ಲಾಲರ ಮೇಲೆ ಕಾನೂನು ಪ್ರಕಾರ ನಿರ್ಧಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲು ರಾಜ್ಯದ ಎಲ್ಲಾ ಮಾರುಕಟ್ಟೆ ಸಮಿತಿಗಳಿಗೆ ನಿರ್ದೇಶನ ನೀಡಲಾಗಿದೆ.

ಇ) ರಾಜ್ಯದಲ್ಲಿನ 32 ಮಾರುಕಟ್ಟೆಗಳಲ್ಲಿ 232 ಪ್ರಕರಣಗಳನ್ನು ಪತ್ತೆ ಹಚ್ಚಿ ಕಾಯ್ದೆ ವಿರುದ್ಧ ರೈತರಿಂದ ವಸೂಲಿ ಮಾಡಲ್ಪಟ್ಟಿದ್ದ ರೂ. 55,421-00ಗಳನ್ನು ರೈತರಿಗೆ ವಾಪಾಸ್ಸು ಮಾಡಲಾಗಿದೆಯಲ್ಲದೆ ಕೆಲವೊಂದು ಪ್ರಕರಣಗಳಲ್ಲಿ ಸಂಬಂಧಿಸಿದ ದಲ್ಲಾಲರ ಮೇಲೆ ಕಾಯ್ದೆ ಪ್ರಕಾರ ಕ್ರಮ ಜರುಗಿಸಲಾಗಿದೆ.

ಈ) ಚುನಾವಣೆ ವಿಷಯಗಳೂ ಸೇರಿದಂತೆ ಕರ್ನಾಟಕ ಕೃಷಿ ಉತ್ಪನ್ನ ಮಾರಾಟ (ನಿಯಂತ್ರಣ) ಕಾಯ್ದೆ, 1966ಕ್ಕೆ ಸಮಗ್ರ ತಿದ್ದುಪಡಿಗಳನ್ನು ಮಾಡಲು ಪ್ರಸ್ತಾಪವು ಸರ್ಕಾರದ ಪರಿಶೀಲನೆಯಲ್ಲಿರುವುದರಿಂದ ಈ ತಿದುಪಡಿಗಳು ಆದ ನಂತರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಿಗೆ ಚುನಾವಣೆಗಳನ್ನು ನಡೆಸುವ ವಿಚಾರವನ್ನು ಸರ್ಕಾರವು ಪರಿಶೀಲಿಸುವುದು.

ಸಕ್ಕರೆ ಕಾರ್ಖಾನೆಗಳನ್ನು ಸುಧಾರಿಸುವ ಬಗ್ಗೆ.

1432 - ಶ್ರೀ ಆರ್.ವಿ. ದೇಶಪಾಂಡೆ (ಹಳಿಯಾಳ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ? -

ಅ) ರಾಜ್ಯದಲ್ಲಿರುವ ಸಹಕಾರ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು? (ಹೆಸರು, ಸ್ಥಳಗಳ ವಿವರ ಒದಗಿಸುವುದು).

ಆ) ಈ ಕಾರ್ಖಾನೆಗಳಲ್ಲಿ ಎಷ್ಟು ಕಾರ್ಖಾನೆಗಳು ಲಾಭದಲ್ಲಿ ಮತ್ತು ಎಷ್ಟು ಕಾರ್ಖಾನೆಗಳು ನಷ್ಟದಲ್ಲಿ ನಡೆಯುತ್ತಿದೆ?

ಇ) ನಷ್ಟದಲ್ಲಿ ನಡೆಯುತ್ತಿರುವ ಸಕ್ಕರೆ ಕಾರ್ಖಾನೆಗಳನ್ನು ಸುಧಾರಿಸುವ ಬಗ್ಗೆ ಸರ್ಕಾರ ಮುಂದೆ ಯಾವುದಾದರೂ ಕಾರ್ಯಕ್ರಮಗಳಿವೆಯೇ?

ಶ್ರೀ ಕೆ.ಹೆಚ್. ಪಾಟೀಲ್ (ಸಹಕಾರ ಸಚಿವರು) :

ಅ) ಹದಿನಾರು

1. ಪಾಂಡವಪುರ ಸಹಕಾರ ಸಕ್ಕರೆ ಕಾರ್ಖಾನೆ, ಪಾಂಡವಪುರ, ಮಂಡ್ಯ ಜಿಲ್ಲೆ.
2. ಹಿರಣ್ಯಕೇಶಿ ಸಹಕಾರ ಸಕ್ಕರೆ ಕಾರ್ಖಾನೆ, ಸಂಕೇಶ್ವರ, ಬೆಳಗಾವಿ ಜಿಲ್ಲೆ.
3. ಬೀದರ್ ಸಹಕಾರ ಸಕ್ಕರೆ ಕಾರ್ಖಾನೆ, ಹಳ್ಳಿಖೇಡ್, ಬೀದರ್.
4. ಮಲಪ್ರಭಾ ಸಹಕಾರ ಸಕ್ಕರೆ ಕಾರ್ಖಾನೆ, ಎಂ.ಕೆ. ಹುಬ್ಬಳ್ಳಿ. ಬೆಳಗಾಂ ಜಿಲ್ಲೆ.
5. ದೂದ್ ಗಂಗಾ ಕೃಷ್ಣಾ ಸಹಕಾರ ಸಕ್ಕರೆ ಕಾರ್ಖಾನೆ, ಚಿಕ್ಕೋಡಿ, ಬೆಳಗಾಂ ಜಿಲ್ಲೆ.

6. ರಾಯಬಾಗ್ ಸಹಕಾರ ಸಕ್ಕರೆ ಕಾರ್ಖಾನೆ ನಿ., ರಾಯಬಾಗ್ ಬೆಳಗಾಂ ಜಿಲ್ಲೆ.
7. ಶ್ರೀ ಶ್ರೀ ರಾಮ ಸಹಕಾರ ಸಕ್ಕರೆ ಕಾರ್ಖಾನೆ ನಿ., ಚುಂಚನಕಟ್ಟೆ, ಮೈಸೂರು ಜಿಲ್ಲೆ.
8. ಶ್ರೀ ಹೇಮಾವತಿ ಸಹಕಾರ ಸಕ್ಕರೆ ಕಾರ್ಖಾನೆ ನಿ., ಶ್ರೀನಿವಾಸಪುರ, ಚನ್ನರಾಯಪಟ್ಟಣ ತಾ: ಹಾಸನಜಿಲ್ಲೆ.
9. ಭದ್ರಾ ಸಹಕಾರ ಸಕ್ಕರೆ ಕಾರ್ಖಾನೆ ನಿ., ದೊಡ್ಡಬಾತಿ, ದಾವಣಗೆರೆ, ಚಿತ್ರದುರ್ಗ ಜಿಲ್ಲೆ.
10. ಕಂಪ್ಲಿ ಸಹಕಾರ ಸಕ್ಕರೆ ಕಾರ್ಖಾನೆ ನಿ., ಕಂಪ್ಲಿ, ಬಳ್ಳಾರಿ ಜಿಲ್ಲೆ.
11. ಹಾಲಸಿದ್ದನಾಥ ಸಹಕಾರ ಸಕ್ಕರೆ ಕಾರ್ಖಾನೆ ನಿ., ನಿಪ್ಪಾಣಿ ಬೆಳಗಾವಿ ಜಿಲ್ಲೆ.
12. ಕರ್ನಾಟಕ ಸಹಕಾರ ಸಕ್ಕರೆ ಕಾರ್ಖಾನೆ ನಿ., ಹಾವೇರಿ, ಧಾರವಾಡ ಜಿಲ್ಲೆ.
13. ಘಟಪ್ರಭಾ ಸಹಕಾರ ಸಕ್ಕರೆ ಕಾರ್ಖಾನೆ ನಿ., ಗೋಕಾಕ್, ಬೆಳಗಾವಿ ಜಿಲ್ಲೆ.
14. ದ. ಕನ್ನಡ ಸಹಕಾರ ಸಕ್ಕರೆ ಕಾರ್ಖಾನೆ, ಬ್ರಹ್ಮಾವರ, ದ.ಕನ್ನಡ ಜಿಲ್ಲೆ.
15. ಸಹಕಾರ ಸಕ್ಕರೆ ಕಾರ್ಖಾನೆ ನಿ., ಆಳಂದ, ಗುಲ್ಬರ್ಗಾ ಜಿಲ್ಲೆ.
16. ವಾಣಿವಿಲಾಸ ಸಹಕಾರ ಸಕ್ಕರೆ ಕಾರ್ಖಾನೆ ನಿ., ಹಿರಿಯೂರು, ಚಿತ್ರದುರ್ಗ ಜಿಲ್ಲೆ.

ಆ) ಈ 16 ಸಹಕಾರ ಸಕ್ಕರೆ ಕಾರ್ಖಾನೆಗಳಲ್ಲಿ 15 ಕಾರ್ಖಾನೆಗಳು ಕಾರ್ಯಗತ ಮಾಡುತ್ತಿದ್ದು ಸದರಿ 15 ಕಾರ್ಖಾನೆಗಳ ಪೈಕಿ 12 ಸಹಕಾರ ಸಕ್ಕರೆ ಕಾರ್ಖಾನೆಗಳು ಲಾಭ ಗಳಿಸುತ್ತಿವೆ ಮತ್ತು 3 ಕಾರ್ಖಾನೆಗಳು ನಷ್ಟದಲ್ಲಿ ನಡೆಯುತ್ತಿವೆ. (1989-90 ಆಡಿಟ್ ವರದಿ ಪ್ರಕಾರ)

ಇ) ಹೌದು

ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಬಿವೃದ್ಧಿ ಬ್ಯಾಂಕಿಗೆ ಸರ್ಕಾರಿ ಸಬ್ಸಿಡಿಯ ಬಾಕಿ.

1430 - ಶ್ರೀ ಆರ್.ವಿ. ದೇಶಪಾಂಡೆ (ಹಳಿಯಾಳ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ ಮೂರು ವರ್ಷಗಳಿಂದ ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕಿಗೆ ಸರ್ಕಾರವು ಯಾವ ಯಾವ ಯೋಜನೆಗಳಿಗಾಗಿ ಪ್ರತಿ ವರ್ಷ ಸಬ್ಸಿಡಿ ಹಣವನ್ನು ಬಿಡುಗಡೆ ಮಾಡಿರುತ್ತದೆ?

ಆ) ಮೇಲ್ಕಂಡ ಸಹಕಾರಿ ಭೂ ಅಭಿವೃದ್ಧಿ ಕೃಷಿ ಬ್ಯಾಂಕಿಗೆ 1-4-1990 ರಿಂದ 28-2-1991ರವರೆಗೆ ಸರ್ಕಾರದಿಂದ ಬಿಡುಗಡೆಯಾದ ಸಬ್ಸಿಡಿ ಹಣವೆಷ್ಟು?

ಇ) ಹಾಗೂ ಬಿಡುಗಡೆಯಾಗಬೇಕಾಗಿರುವ ಸಬ್ಸಿಡಿ ಹಣದ ಬಾಕಿ ಮೊತ್ತ ಎಷ್ಟು?

ಈ) ಸಬ್ಸಿಡಿ ಹಣ ಬಾಕಿ ಬಿಡುಗಡೆಯಾಗದಿರುವುದರಿಂದ ಬ್ಯಾಂಕಿನಿಂದ ಕೈಗೊಳ್ಳುವ ಅಬಿವೃದ್ಧಿ ಕಾರ್ಯಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಉ) ಹಾಗಿದ್ದಲ್ಲಿ ಸರ್ಕಾರ ಈ ಬಗ್ಗೆ ಯಾವ ಕ್ರಮಗಳನ್ನು ಕೈಗೊಳ್ಳುತ್ತಿದೆ?

ಶ್ರೀ ಕೆ.ಹೆಚ್. ಪಾಟೀಲ್ (ಸಹಕಾರ ಸಚಿವರು):